**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕೋರ್ಟ,**
**ಬಸವನ ಬಾಗೇವಾಡಿ.**

ಸಿಸಿ ನಂಃ 658/2018

ಸಿಡಬ್ಲ್ಯೂ 13 ಪಿಡಬ್ಲ್ಯೂ 8

| | | |
|---|---|---|
| ಸಾಕ್ಷಿದಾರರ ಹೆಸರು | ಪರಸಪ್ಪ ಮಾದರ | |
| ತಂದೆ/ಗಂಡನ ಹೆಸರು | ಹಣಮಂತ | |
| ವಯಸ್ಸು | 46 | ವರ್ಷ |
| ಉದ್ಯೋಗ | ವಾಟರ್ ಮೇನ್ ಹಣಮಾಪೂರ ಗ್ರಾಮ ಪಂಚಾಯತಿ | |
| ವಾಸಸ್ಥಳ | ಹಣಮಾಪೂರ | |

**ಸಾಕ್ಷಿಯನ್ನು ಇಂದು ದಿನಾಂಕಃ 02.06.2026 ರಂದು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದ**

**1.** ನಾನು **2004** ರಿಂದ ಇಲ್ಲಿಯವರೆಗೆ ಹಣಮಾಪೂರ ಗ್ರಾಮ ಪಂಚಾಯತಿಯಲ್ಲಿ ವಾಟರ್ ಮೇನ್ ಅಂತ ಕರ್ತವ್ಯ ನಿರ್ವಹಿಸುತ್ತಿರುತ್ತೇನೆ.

**2.** ಸನ್**-2017** ರಂದು ನಾನು ನಮ್ಮ ಮನೆಯಲ್ಲಿ ಇದ್ದಾಗ ಚಾಸಾ**-1** ರವರು ನನಗೆ ಫೋನ್ ಮಾಡಿ ಮಟ್ಟಿಹಾಳ ಕ್ರಾಸ್ ಗೆ ಬರುವಂತೆ ತಿಳಿಸಿರುತ್ತಾರೆ. ನಂತರ ನಾನು ಸದರಿ ಸ್ಥಳಕ್ಕೆ ಹೋದಾಗ ಚಾಸಾ**-1,16** ಮತ್ತು ಪೋಲಿಸರು ಇದ್ದರು. ಗಲಾಟೆಯ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಎಪಿಪಿ ರವರು ಈ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿಸಿ ಪಾಟಿ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

<u>ಪಾಟೀ ಸವಾಲು ಎ.ಪಿ.ಪಿ ವಕೀಲರಿಂದ</u>

**1.** ದಿಃ **27.08.2017** ರಂದು ಬೆಳಿಗ್ಗೆ **04.00** ರಿಂದ **06.00** ಗಂಟೆಯ ಮಧ್ಯದ ಅವಧಿಯಲ್ಲಿ ಆರೋಪಿತರು ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ಕಾನೂನು ಬಾಹಿರವಾಗಿ ಅಕ್ರಮ ಕೂಟ ಕಟ್ಟಿಕೊಂಡು ಬಂದು ಮಟ್ಟಿಹಾಳ ಕ್ರಾಸ್ ನಲ್ಲಿ ಒಂದು ಧ್ವಜದ ಕಟ್ಟೆಯನ್ನು ಕಟ್ಟಿ ಅದರ ಮೇಲೆ ನೀಲಿ ಬಣ್ಣದ ಧ್ವಜವನ್ನು ಹಾರಿಸಲಾಗಿತ್ತು ಎಂದರೆ ಸಾಕ್ಷಿಯು ನನಗೆ ಆ ಕುರಿತು ನನಗೆ ಗೊತ್ತಿರುವುದಿಲ್ಲ ಎಂದು ಹೇಳುತ್ತಾರೆ. ನಂತರ ಚಾಸಾ-**1,16** ಮತ್ತು **17** ರವರು ಆರೋಪಿತರಿಗೆ ಧ್ವಜದ ಕಟ್ಟೆಯನ್ನು ತೆಗೆಯುವಂತೆ ಹೇಳಿದಾಗ ಅವರುಗಳು ಚಾಸಾ-**1,16** ಮತ್ತು **17** ರವರೊಂದಿಗೆ ಅಸಭ್ಯ ರೀತಿಯಲ್ಲಿ ವರ್ತಿಸಿ ಅವಾಚ್ಯ ಶಬ್ದಗಳಿಂದ ಬೈದು ಅವರಿಗೆ ತಳ್ಳಲು ಪ್ರಯತ್ನಿಸಿರುತ್ತಾರೆ ಮತ್ತು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಂತರ ನಾವುಗಳು ಮತ್ತು ಸಿಬ್ಬಂದಿಗಳು ಎಲ್ಲರೂ ಸೇರಿ ಸದರಿ ಧ್ವಜದ ಕಟ್ಟೆಯನ್ನು ತೆರವುಗೊಳಿಸಿರುತ್ತೇವೆ ಎಂದರೆ ಸರಿಯಲ್ಲ.

**2.** ಈ ಕುರಿತು ಚಾಸಾ-**1** ರವರು ಆರೋಪಿತರ ವಿರುದ್ಧ ದೂರನ್ನು ನೀಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

3. ನಾನು ದಿಃ **03.09.2017** ರಂದು ಈ ಘಟನೆಯ ಕುರಿತು ಹೇಳಿಕೆಯನ್ನು ಪೋಲಿಸರ ಮುಂದೆ ನೀಡಿರುತ್ತೇನೆ ಎಂದರೆ ಸರಿಯಲ್ಲ**.** ಸಾಕ್ಷಿಯು ಅಲ್ಲಗಳೆದ ಹೇಳಿಕೆ ಭಾಗವನ್ನು ನಿಪಿ**-4** ಎಂದು ಗುರುತಿಸಲಾಯಿತು**.** ನನಗೆ ನಿಪಿ**-4** ರಲ್ಲಿ ಬರೆದಿರುವ ಅಂಶಗಳು ಗೊತ್ತಿದ್ದರೂ ಕೂಡಾ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ**.**

**ಪಾಟೀ ಸವಾಲು:- ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ,

**1 ನೇ ಹೆಚ್ಚುವರಿ ಸಿವಿಲ್ ವ ಜೆ ಎಮ್ ಎಫ್ ಸಿ ನ್ಯಾಯಾಧೀಶರು,**
**ಬಸವನ ಬಾಗೇವಾಡಿ.**